**<u>ಗೌರವಾನ್ವಿತ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ, ಅರಕಲಗೂಡು.</u>**

**ಅಪರಾಧ ಪ್ರಕರಣ ಸಂಖ್ಯೆಃ 1023/2018**

| | | |
|---|---|---|
| **ಸಾಕ್ಷಿಯ ಹೆಸರು** | ಪುಟ್ಟಸ್ವಾಮಿ ಸಿ.ಕೆ | ಚಾಸಾ-15 |
| **ಉದ್ಯೋಗ** | ನಿವೃತ್ತ ಎ.ಎಸ್.ಐ | ಪ್ರಾಸಾ-4 |
| **ವಾಸ ಸ್ಥಳ** | ಹಾಸನ | |
| **ದಿನಾಂಕಃ 09.01.2025** ರಂದು ಸಾಕ್ಷಿಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು. | | |

**<u>ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕ ರವರಿಂದ.</u>**

ನಾನು 2012 ರಿಂದ 2019 ರವರೆಗೂ ಅರಕಲಗೂಡು ಪೊಲೀಸ್ ಠಾಣೆಯಲ್ಲಿ ಮುಖ್ಯ ಪೇದೆಯಾಗಿ ಕರ್ತವ್ಯ ಮಾಡಿರುತ್ತೇನೆ.

ತನಿಖೆ ಸಮಯದಲ್ಲಿ ನಾನು ಆರೋಪಿಯನ್ನು ನೋಡಿರುತ್ತೇನೆ. ದಿನಾಂಕ 19.10.2018 ರಂದು ನಾನು ಎಸ್.ಹೆಚ್.ಓ ಕರ್ತವ್ಯದಲ್ಲಿದ್ದಾಗ ಸಂಜೆ 6.15 ಗಂಟೆಗೆ ಪಿರ್ಯಾದಿ ಠಾಣೆಗೆ ಬಂದು ಕೊಟ್ಟ ಲಿಖಿತ ದೂರಿನ ಮೇರೆಗೆ ಠಾಣಾ ಮೊಕದ್ದಮ್ಮೆ ಸಂಖ್ಯೆ 364ಃ2018 ರಲ್ಲಿ ಪ್ರಕರಣವನ್ನು ದಾಖಲಿಸಿರುತ್ತೇನೆ. ನಂತರ ಪ್ರ ವ ವ ವನ್ನು ನ್ಯಾಯಾಲಯಕ್ಕೆ ಮತ್ತು ನಮ್ಮ ಮೇಲಾಧಿಕಾರಿಗಳಿಗೆ ನೀಡಿ ಕಳುಹಿಸಿರುತ್ತೇನೆ. ಮುಂದಿನ ತನಿಖೆಗೆ ನಾನು ಚಾಸಾ 17 ರವರಿಗೆ ಕಡತವನ್ನು ಹಸ್ತಾಂತರಿಸಿರುತ್ತೇನೆ.

1) ನಿಪಿ 1 ರಲ್ಲಿರುವ ತನ್ನ ಸಹಿಯನ್ನು ಸಾಕ್ಷಿಯು ನೋಡಿ ಗುರುತಿಸಿದ್ದು ಸದರಿ ಸಾಕ್ಷಿ ಸಹಿಯನ್ನು ನಿಪಿ **1(ಬಿ)** ಎಂದು ಗುರುತಿಸಲಾಯಿತು.

2) ದಿನಾಂಕ 19.10.2018 ರಂದು ದಾಖಲಿಸಿದ ಪ್ರವ ವ ವನ್ನು ಸಾಕ್ಷಿ ನೋಡಿ ಗುರುತಿಸಿದ್ದು ಸದರಿ ಪ್ರ ವ ವ ವನ್ನು ನಿಪಿ 8 ಎಂದು ಮತ್ತು ಸಾಕ್ಷಿ ಸಹಿಯನ್ನು ನಿಪಿ 8(ಎ) ಎಂದು ಗುರುತಿಸಲಾಯಿತು.

**<u>ಪಾಟೀ ಸವಾಲು ಆರೋಪಿ ಪರ ಶ್ರೀ ಎಂ.ಎನ್.ಆರ್ ವಕೀಲರ ಪರ ಶ್ರೀ ಕೆ.ಪಿ.ಕೆ ವಕೀಲರಿಂದಃ</u>**

ನಾನು ಆ ದಿನ ಯಾವುದೇ ದೂರನ್ನು ಸ್ವೀಕರಿಸಲಿಲ್ಲ ಎಂದರೆ ಸರಿಯಲ್ಲ. ಸದರಿ ದೂರಿನ ಆಧಾರದ ಮೇಲೆ ಯಾವುದೇ ಪ್ರಕರಣವನ್ನು ದಾಖಲಿಸಿ ಪ್ರ.ವ.ವ ವನ್ನು ದಾಖಲಿಸಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಮತ್ತು ಪಿರ್ಯಾದುದಾರರು ಷರೀಖ್ ಆಗಿ ಆರೋಪಿ ವಿರುದ್ದ ಸುಳ್ಳು ಪ್ರಕರಣವನ್ನು ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೇ. ಸರಿಯಿದೆ.

**ಸಿವಿಲ್ ಮತ್ತು ಜೆ.ಎಂ.ಎಫ್.ಸಿ.ನ್ಯಾಯಾಧೀಶರು.**
**ಅರಕಲಗೂಡು**